ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಘನತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣದ ಮೂಲಕ ತ್ಯಾಜ್ಯದ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಂಡ

## ಕೆಂಗಾನೂರ ಗ್ರಾಮ ಪಂಚಾಯಿತಿ

ಗ್ರಾಮೀಣ ಭಾಗದಲ್ಲಿ ಸಂಪೂರ್ಣ ನೈರ್ಮಲ್ಯತೆಯನ್ನು ಸಾಧಿಸುವ ದೃಷ್ಟಿಯಿಂದ ಸರ್ಕಾರ ಸ್ವಚ್ಛ ಭಾರತ್ (ಗ್ರಾ) ಯೋಜನೆಯಡಿ ಶ್ರಮಿಸುತ್ತಿದೆ. ಮೂಲದಲ್ಲಿಯೇ ತ್ಯಾಜ್ಯದ ಸೂಕ್ತ ವಿಲೇವಾರಿಗಾಗಿ ಸ್ವಚ್ಛತಾ ವಾಹಿನಿ ಮೂಲಕ ಮನೆ ಮನೆಯಿಂದ ಕಸ ಸಂಗ್ರಹಿಸುವ ಮೂಲಕ ಗ್ರಾಮದ ಸ್ವಚ್ಛತೆಗೆ ಆದ್ಯತೆ ನೀಡಲಾಗುತ್ತಿದೆ. ಘನ ತ್ಯಾಜ್ಯ ವಿಲೇವಾರಿ ಘಟಕಗಳ ಮೂಲಕ ತ್ಯಾಜ್ಯದ ಸೂಕ್ತ ವಿಲೇವಾರಿ ಮಾಡಲಾಗುತ್ತಿದೆ. ಗ್ರಾಮದಲ್ಲಿ ನೈರ್ಮಲ್ಯ ಕಾಯ್ದುಕೊಂಡು ಜನರ ಜೀವನ ಮಟ್ಟ ಸುಧಾರಿಸುವ ಮೂಲಕ ಗ್ರಾಮದಲ್ಲಿ ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಸ್ವಚ್ಛ ಭಾರತ್ ಮಿಷನ್(ಗ್ರಾ) ಕೆಲಸ ನಿರ್ವಹಿಸುತ್ತಿದೆ. ಇದೇ ಹಾದಿಯಲ್ಲಿ ವಿನೂತನ ಹೆಜ್ಜೆಯಿಟ್ಟ ಕೆಂಗಾನೂರ ಗ್ರಾಮ ಪಂಚಾಯಿತಿಯು ತ್ಯಾಜ್ಯದ ನಿರ್ವಹಣೆಗೆ ಶಾಶ್ವತ ಪರಿಹಾರ ಕಂಡುಕೊಂಡಿದೆ.

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರ ಗ್ರಾಮ ಪಂಚಾಯಿತಿಯು ತಾಲ್ಲೂಕು ಕೇಂದ್ರದಿಂದ 10 ಕಿ.ಮೀ ದೂರದಲ್ಲಿದೆ. ಈ ಗ್ರಾಮ ಪಂಚಾಯಿತಿಯು ಒಟ್ಟು 1378.74 ಹೆಕ್ಟೇರ್ ಭೌಗೋಳಿಕ ಕೇತ್ರವನ್ನು ಹೊಂದಿದೆ. ಕೆಂಗನೂರ ಗ್ರಾ.ಪಂ ವ್ಯಾಪ್ತಿಯಲ್ಲಿ ಕೆಂಗನೂರ, ಜಾಲಿಕೊಪ್ಪ, ಅರವಳ್ಳಿ ಹಾಗೂ ಲಿಂಗದಳ್ಳಿ ಗ್ರಾಮಗಳು ಬರುತ್ತವೆ.

ಮಲಪ್ರಭಾ ನದಿ ಪಾತ್ರದಲ್ಲಿ ಬರುವ ಈ ಗ್ರಾಮಗಳಲ್ಲಿ ಸೋಯಾಬಿನ್, ಹತ್ತಿ, ಕಬ್ಬು , ಜೋಳ, ಮೆಣಸಿನಕಾಯಿಯನ್ನು ಬೆಳೆಯಲಾಗುತ್ತದೆ.

### ತ್ಯಾಜ್ಯ ನಿರ್ವಹಣೆಗೆ ಶಾಶ್ವತ ಪರಿಹಾರವಾದ ಘನತ್ಯಾಜ್ಯ ವಿಲೇವಾರಿ ಘಟಕ

ಕೃಷಿ ಪ್ರಧಾನವಾದ ಕೆಂಗಾನೂರ ಗ್ರಾಮ ಪಂಚಾಯಿತಿಯಲ್ಲಿ ತ್ಯಾಜ್ಯ ವಿಲೇವಾರಿ ಬಹುದೊಡ್ಡ ಸಮಸ್ಯೆಯಾಗಿತ್ತು. ನೈರ್ಮಲ್ಯದ ಬಗ್ಗೆ ಅರಿವಿಲ್ಲದೆ ಜನರು ಎಲ್ಲೆಂದರಲ್ಲಿ ಒಣಕಸ ಎಸೆಯುತ್ತಿದ್ದರಿಂದ ಗ್ರಾಮಗಳಲ್ಲಿ ಸ್ವಚ್ಛತೆ ಮಾಯವಾಗಿತ್ತು. ಬಳಿಕ ಕೆಂಗಾನೂರ ಗ್ರಾ.ಪಂ ವ್ಯಾಪ್ತಿಯಲ್ಲಿ ಸ್ವಚ್ಛತೆಯನ್ನು ಕಾಯ್ದುಕೊಳ್ಳಲು ಗ್ರಾಮ ಪಂಚಾಯಿತಿಯಿಂದ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ಘನ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣಕ್ಕೆ ಮುಂದಾದರು.

ಗ್ರಾಮ ಪಂಚಾಯಿತಿಯು ಘನ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣದ ಗುರಿ ಸಾಧಿಸಲು ಪ್ರಾರಂಭದಲ್ಲಿ ಗ್ರಾ.ಪಂ ಸದಸ್ಯರು, ಗ್ರಾಮಸ್ಥರು ಬೆಂಬಲಿಸಲಿಲ್ಲ. ಘಟಕ ನಿರ್ಮಾಣವಾದರೆ ಗ್ರಾಮದಲ್ಲಿ ವಾಸನೆ, ಉಂಟಾಗುತ್ತದೆ ಎಂಬ ಮಾತುಗಳು ಸಾರ್ವಜನಿಕರಿಂದ ಕೇಳಿ ಬಂದವು. ಗ್ರಾಮಸ್ಥರ ಮನವೊಲಿಸಿ ಘನ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಿಸುವುದು ಸವಾಲಿನ ಕೆಲಸವೇ ಆಗಿತ್ತು.

ಬಳಿಕ ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಯ ಮೂಲಕ ಘನ ತ್ಯಾಜ್ಯ ವಿಲೇವಾರಿ ಘಟಕದ ಬಗ್ಗೆ ತಿಳುವಳಿಕೆ ಮೂಡಿಸಲಾಯಿತು. ಮನೆ, ಮನೆಗೆ ಭೇಟಿ ನೀಡಿ, ಸಭೆಗಳನ್ನು ಆಯೋಜಿಸಿ ಘಟಕದ ಕುರಿತು ಅರಿವು ಮೂಡಿಸಲಾಯಿತು. ಅಷ್ಟೇ ಅಲ್ಲ, ಗ್ರಾ.ಪಂ ಸದಸ್ಯರು ಹಾಗೂ ಕೆಲವು ಗ್ರಾಮಸ್ಥರನ್ನು ಕರೆದೊಯ್ದು ನಂದಗಡ ಗ್ರಾಮ ಪಂಚಾಯತಿಯ ಘನ ತ್ಯಾಜ್ಯ ವಿಲೇವಾರಿ ಘಟಕವನ್ನು ತೋರಿಸಿದಾಗ ಘಟಕದ ಪ್ರಾಮುಖ್ಯತೆಯ ಬಗ್ಗೆ ತಿಳಿದುಕೊಂಡು ಘನ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣಕ್ಕೆ ಒಪ್ಪಿಕೊಂಡರು.

### ತ್ಯಾಜ್ಯವನ್ನು ಸಂಪನ್ಮೂಲವಾಗಿಸಿದ ಹಾದಿ

ಗ್ರಾಮಸ್ಥರ ಒಪ್ಪಿಗೆ ದೊರೆತ ಬಳಿಕ ಕೆಂಗಾನೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ಥಳ ಗುರುತಿಸಿ 20 ಲಕ್ಷ ವೆಚ್ಚದಲ್ಲಿ ಗ್ರಾಮ ಪಂಚಾಯಿತಿಯವರು ಘನ ತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಮಾಡಿದರು. ಸ್ವ-ಸಹಾಯ ಸಂಘದ ಮಹಿಳೆಯರು ಮನೆ ಮನೆಯಿಂದ ಸ್ವಚ್ಛತಾ ವಾಹಿನಿಯ ಮೂಲಕ ಕಸ ಸಂಗ್ರಹಿಸಿ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ರವಾನಿಸಿ, ಬಳಿಕ ಪ್ಲಾಸ್ಟಿಕ್, ಪೇಪರ್, ರಟ್ಟುಗಳು, ಕಬ್ಬಿಣ ಹೀಗೆ ವಿವಿಧ ಪ್ರಕಾರಗಳಾಗಿ ತ್ಯಾಜ್ಯವನ್ನು ವಿಂಗಡಿಸುತ್ತಾರೆ. ಬಳಿಕ ವಿಂಗಡಿಸಲ್ಪಟ್ಟ ತ್ಯಾಜ್ಯವನ್ನು ರಿಸೈಕ್ಲಿಂಗ್ ಕೇಂದ್ರಗಳಿಗೆ ರವಾನಿಸುವ ಮೂಲಕ ತ್ಯಾಜ್ಯವನ್ನು ಸಂಪನ್ಮೂಲವಾಗಿ ಮಾರ್ಪಡಿಸಲು ವರ್ತುಲ ಆರ್ಥಿಕತೆ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತದೆ.

ಕೆಂಗಾನೂರ ಗ್ರಾಮ ಪಂಚಾಯಿತಿಯಲ್ಲಿ ಘನತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣವಾಗಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಬೈಲಹೊಂಗಲ ಮತಕ್ಷೇತ್ರದ ಶಾಸಕರು ಭೇಟಿ ನೀಡಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಗ್ರಾಮ ಪಂಚಾಯಿತಿ ಹಾಗೂ ಗ್ರಾಮಸ್ಥರ ಜವಾಬ್ದಾರಿಯುತ ನಡೆಯಿಂದ ಎಲ್ಲೆಂದರಲ್ಲಿ ಕಸ, ತ್ಯಾಜ್ಯ ಎಸೆಯುವುದು ಕಡಿಮೆಯಾಗಿದೆ. ಈ ಮೂಲಕ ಗ್ರಾಮದಲ್ಲಿ ಸ್ವಚ್ಛ , ಸುಂದರ ಪರಿಸರ ನಿರ್ಮಾಣವಾಗಿದೆ.

ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್ | ಜಲೋತ್ಸವ | ಸ್ವಚ್ಛ ಸಂಕೀರ್ಣ | 8277506000 ಏಕೀಕೃತ ಸಹಾಯವಾಣಿ

